**<u>ಸಾಕ್ಷಿಗೆ ದಿನಾಂಕ *20 -06-2025* ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀಮತಿ ಎಸ್ ಎ ಹೆಚ್ ವಕೀಲರಿಂದಃ</u>**

ನಾನು ಈ ದಿನ ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇದ್ದು, ನಾನೇ ಹೇಳಿ ಬರೆಸಿದ್ದು, ಅದರಲ್ಲಿನ ಸಹಿಗಳು ನನ್ನದೇ ಇರುತ್ತವೆ.

ನಾನು ಈ ಕೆಳಕಂಡ ದಾಖಲೆಗಳನ್ನು ಗುರುತಿಸುತ್ತೇನೆ.

ನಿಪಿ-1 ಃಎಮ್ ವಿ ಸಿ ನಂ. 127/2020 ಇದರಲ್ಲಿನ ಆದೇಶ ಪುಟದ ದೃಢೀಕೃತ ಪ್ರ.

ಅರ್ಜಿಯಲ್ಲಿ ಕೋರಿರುವಂತೆ ಆದೇಶ ಮಾಡಬೇಕೆಂದು ಕೋರುತ್ತೇನೆ.

ಪಾಟೀ ಸವಾಲುಃ 2 ನೇ ಎದರುದಾರರ ಪರ ಶ್ರೀ ಎಮ್ ಎಸ್ ಹೆಚ್ ವಕೀಲರಿಂದ

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರಕ್ಕೆ ಮಾಹಿತಿಯನ್ನು ನನ್ನ ತಾಯಿಯವರು ನೀಡಿರುತ್ತಾರೆ. ನನಗೆ 2008 ರಲ್ಲಿ ಅಪಘಾತವಾಗಿದ್ದು, ಈ ಕುರಿತು ಪರಿಹಾರದ ಸಲುವಾಗಿ ಅರ್ಜಿ ಸಲ್ಲಿಸಿರುತ್ತೇನೆ. ನಾನು ಅಪಘಾತದ ಸಲುವಾಗಿ ಅರ್ಜಿಯನ್ನು ಸಲ್ಲಿಸಿದ್ದು, ಈ ಕುರಿತು ಸಾಕ್ಷಿ ಹೇಳಲು ಬಂದಿರುತ್ತೇನೆ. ನ್ಯಾಯಾಲಯದಲ್ಲಿ ಏನು ಪರಿಹಾರ ಕೇಳಿ ಅರ್ಜಿಯನ್ನು ಸಲ್ಲಿಸಿದ್ದೀರಾ ಎಂದರೆ ಸಾಕ್ಷಿದಾರರು ಯಾವುದೇ ಉತ್ತರವನ್ನು ನೀಡಿರುವುದಿಲ್ಲ.

**ಪಾಟೀ ಸವಾಲು ಮಾಡಲು ಸಮಯ ಕೋರಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿದೆ)

ಓ. ಹೇ. ಕೇ. ಸರಿ ಅದೆ.

ಹಿರಿಯ ದಿವಾಣಿ ನ್ಯಾಯಾಧೀಶರು,
ಹುನಗುಂದ.